ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (430)278
ಸದಸ್ಯರ ಹೆಸರು : ಶ್ರೀ ಅಮರೇಗೌಡಲಿಂಗನಗೌಡ ಬಯ್ಯಾಪುರ
ಉತ್ತರಿಸುವ ಸಚಿವರು : (ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.

ಅ) ಶಿಕ್ಷಣ ಇಲಾಖೆಯಲ್ಲಿ ಬರುವ ಹಿರಿಯ ಹಾಗೂ ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ದೈಹಿಕ ಶಿಕ್ಷಕರ ನೇಮಕಾತಿಯು ಈ ಹಿಂದೆ ಅನುಮೋದನೆಗೊಂಡಿರುವುದು ನಿಜವೇ;

ಹೌದು

ಆ) ಹಾಗಿದ್ದಲ್ಲಿ, ಎಷ್ಟು ದೈಹಿಕ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗುವುದು; ನೇಮಕ ಮಾಡಿಕೊಳ್ಳಲು ಇರುವ ತೊಂದರೆಗಳೇನು;

2006-07ನೇ ಸಾಲಿನಲ್ಲಿ ಸರ್ಕಾರವು ಅನುಮತಿ ನೀಡಿದೆ. 590 ದೈಹಿಕ ಶಿಕ್ಷಕರ ಹುದ್ದೆಗಳನ್ನು ನೇಮಕಾತಿ ಮಾಡಲಾಗಿದೆ. ಸರ್ಕಾರಿ ಅಧಿಸೂಚನೆ ಸಂಖ್ಯೆ: ಇಡಿ 195 ಪಿಬಿಎಸ್ 2006, ದಿನಾಂಕ: 31.08.2007 ರ ಆದೇಶದ ಪ್ರಕಾರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಿಗೆ 82 ದೈಹಿಕ ಶಿಕ್ಷಕರ ಹುದ್ದೆಗಳನ್ನು 29 ವರ್ಷ ವಯೋಮಿತಿ ಮೀರಿದ ಅಭ್ಯರ್ಥಿಗಳಿಂದ ಭರ್ತಿ ಮಾಡಲು ಆದೇಶವಾಗಿದೆ. ಈ ಹುದ್ದೆಗಳಿಗೆ ವಿಶೇಷಾಧಿಕಾರಿ ಕೇಂದ್ರಿಕೃತ ದಾಖಲಾತಿ ಘಟಕ, ಬೆಂಗಳೂರು, ಇವರು ಆಯ್ಕೆ ಪ್ರಾಧಿಕಾರವಾಗಿದ್ದು, ಇವರಿಗೆ ಕೂಡಲೇ ಅಧಿಸೂಚನೆ ಹೊರಡಿಸಲು ತಿಳಿಸಲಾಗಿದೆ. ಇದಲ್ಲದೆ 1700 ವಿಶೇಷ ಶಿಕ್ಷಕರ ಹುದ್ದೆಗಳನ್ನು ಹೊಸದಾಗಿ ಸೃಜಿಸಲು ಇಲಾಖೆಯಿಂದ ಪ್ರಸ್ತಾವನೆ ಬಂದಿದ್ದು ಇದರಲ್ಲಿ 1034 ದೈಹಿಕ ಶಿಕ್ಷಕರ ಹುದ್ದೆಗಳಿವೆ. ಈ ಪ್ರಸ್ತಾವನೆ ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದ್ದು, ಆರ್ಥಿಕ ಇಲಾಖೆಯು ಅನುಮತಿ ನೀಡಿದ ನಂತರ ಸದರಿ ಹುದ್ದೆಗಳ ನೇಮಕಾತಿಗೆ ಕ್ರಮವಹಿಸಲಾಗುವುದು.

ಇ) ಹಾಗಿಲ್ಲದಿದ್ದಲ್ಲಿ, ಯಾವಾಗ ನೇಮಕ ಮಾಡಿಕೊಳ್ಳಲಾಗುವುದು?

ಮೇಲಿನ 'ಆ' ಪ್ರಶ್ನೆಗೆ ನೀಡಿರುವ ಉತ್ತರದಲ್ಲಿ ತಿಳಿಸಿರುವಂತೆ ಕ್ರಮವಹಿಸಲಾಗುವುದು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (431)279
ಸದಸ್ಯರ ಹೆಸರು : ಶ್ರೀ ಅಮರೇಗೌಡ ಲಿಂಗನಗೌಡ ಬಯ್ಯಾಪುರ
ಉತ್ತರಿಸುವ ಸಚಿವರು : (ಶ್ರೀ ಅರವಿಂದ ಲಿಂಬಾವಳಿ) ಮಾನ್ಯ ಉನ್ನತ ಶಿಕ್ಷಣ ಸಚಿವರು

ಅ) ಕೊಪ್ಪಳ ಜಿಲ್ಲೆಯ ಕುಷ್ಟಗಿ ಪಟ್ಟಣದಲ್ಲಿನ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿಗೆ ಮಂಜೂರಾದ ಉಪನ್ಯಾಸಕರ ಸಂಖ್ಯೆ ಎಷ್ಟು;

ಸರ್ಕಾರಿ ಪಾಲಿಟೆಕ್ನಿಕ್, ಕುಷ್ಟಗಿ ಸಂಸ್ಥೆಗೆ ಮಂಜೂರಾಗಿರುವ ಉಪನ್ಯಾಸಕರ ಹುದ್ದೆಗಳ ಸಂಖ್ಯೆ 29.

ಆ) ಈ ಕಾಲೇಜಿನಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರ ಸಂಖ್ಯೆ ಎಷ್ಟು; ನಿಯೋಜನೆಗೊಂಡ ಉಪನ್ಯಾಸಕರ ಸಂಖ್ಯೆ ಎಷ್ಟು;

ಸದರಿ ಪಾಲಿಟೆಕ್ನಿಕ್‌ನಲ್ಲಿ ಪ್ರಸ್ತುತ 13 ಉಪನ್ಯಾಸಕರುಗಳು ಕಾರ್ಯನಿರ್ವಹಿಸುತ್ತಿರುತ್ತಾರೆ. 2008–09ನೇ ಸಾಲಿನಿಂದ ಪ್ರಾರಂಭವಾಗಿರುವ ಹೊಸ ಸರ್ಕಾರಿ ಪಾಲಿಟೆಕ್ನಿಕ್‌ಗಳಿಗೆ 3 ಉಪನ್ಯಾಸಕರುಗಳನ್ನು ನಿಯೋಜನೆ ಮಾಡಲಾಗಿದೆ.

ಇ) ಈ ನಿಯೋಜನೆಯನ್ನು ರದ್ದುಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ಹಾಗೂ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ಯಾವಾಗ ತುಂಬಲಾಗುವುದು?

ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಹಾಲಿ ಖಾಲಿಯಿದ್ದ ಹಾಗೂ 2008–09ನೇ ಸಾಲಿನಲ್ಲಿ ಹೊಸದಾಗಿ ಪ್ರಾರಂಭಿಸಲಾಗಿರುವ ಸರ್ಕಾರಿ ಪಾಲಿಟೆಕ್ನಿಕ್‌ಗಳಿಗೆ ಮೊದಲನೆ ಹಂತದಲ್ಲಿ ಮಂಜೂರಾದ ಒಟ್ಟು 476 ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಈಗಾಗಲೇ ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಕೋರಿಕೆ ಸಲ್ಲಿಸಲಾಗಿದ್ದು ಅದರಂತೆ ಆಯೋಗವು ದಿನಾಂಕ: 2–6–2008 ರ ಅಧಿಸೂಚನೆಯನ್ವಯ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿರುತ್ತದೆ. ಈ ನೇಮಕಾತಿ ಪ್ರಕ್ರಿಯೆಯು ಪೂರ್ಣಗೊಂಡ ನಂತರ ನಿಯೋಜನೆ ಮೇರೆಗೆ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರುಗಳ ನಿಯೋಜನೆಯನ್ನು ರದ್ದುಪಡಿಸಲು ಕ್ರಮವಹಿಸಲಾಗುವುದು.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**(134) 280**
ಸದಸ್ಯರ ಹೆಸರು	:	**ಶ್ರೀ ಬಾಲಕೃಷ್ಣ ಹೆಚ್.ಸಿ**
ಉತ್ತರಿಸಬೇಕಾದ ಸಚಿವರು	:	**(ಶ್ರೀ ಅರವಿಂದ ಲಿಂಬಾವಳಿ) ಉನ್ನತ ಶಿಕ್ಷಣ ಸಚಿವರು**

ಅ) ಮಾಗಡಿ ಮತ್ತು ರಾಮನಗರ ತಾಲ್ಲೂಕಿನಲ್ಲಿರುವ ಪದವಿ ಕಾಲೇಜಿನ ಉಪನ್ಯಾಸಕರ ಹಾಗೂ ಕೊಠಡಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಹೌದು

ಆ) ಹಾಗಿದ್ದಲ್ಲಿ, ಅವುಗಳ ವಿಷಯವಾರು ವಿವರ ನೀಡುವುದು;